ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ

ದಿನಾಂಕ : DATE : 20/06/2019

# ನಾಗಮಂಗಲ ಶಾಸಕ ಸೇರಿ ಐವರಿಗೆ ನೋಟಿಸ್

ಉವಾ. 20/6/19

ಬೆಂಗಳೂರು: ದಿ ಏರ್‌ಕ್ರಾಫ್ಟ್ ಎಂಪ್ಲಾಯೀಸ್ ಹೌಸ್ ಬಿಲ್ಡಿಂಗ್ ಕೋ-ಆಪರೇಟಿವ್ ಸೊಸೈಟಿ ಲಿ. ನಿರ್ಮಿಸಿರುವ ಕೊಡ್ಲು ಸಿಂಗಸಂದ್ರ ಬಡಾವಣೆಯ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗುವಂತೆ ಸೊಸೈಟಿಯ ಮಾಜಿ ಅಧ್ಯಕ್ಷ, ನಾಗಮಂಗಲ ಕ್ಷೇತ್ರದ ಶಾಸಕ ಸುರೇಶ್ ಗೌಡ ಸೇರಿ ಐವರಿಗೆ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ನೋಟಿಸ್ ಜಾರಿ ಮಾಡಿದೆ.

ಬೆಂಗಳೂರಿನ ಎಂ.ಡಿ.ಗಣೇಶನ್, ಎಚ್.ಸಂಜಯ್ ಎಂಬವರು ನೀಡಿದ ದೂರಿನ ಸಂಬಂಧ ಸೊಸೈಟಿಯ ಮಾಜಿ ಅಧ್ಯಕ್ಷರುಗಳಾದ ನಾಗಮಂಗಲ ವಿಧಾನಸಭಾ ಕ್ಷೇತ್ರದ ಶಾಸಕ ಸುರೇಶ್‌ಗೌಡ, ಎಂ.ಎ.ಗೋಪಾಲಸ್ವಾಮಿ, ಎಂ.ಸಂತೋಷ್, ಎನ್.ದೇವರಾಜು ಹಾಗೂ ಸೊಸೈಟಿಯ ಮುಖ್ಯ ಕಾರ್ಯನಿರ್ವಾಹಕ ಜಿ.ಎಚ್.ಬಾಲಾಜಿ ಅವರಿಗೆ ಇದೇ ಜೂನ್ 21ರಂದು ಮೂಲ ದಾಖಲೆಗಳೊಂದಿಗೆ ವಿಚಾರಣೆಗೆ ಹಾಜರಾಗಿ ತಮ್ಮ ಹೇಳಿಕೆ ದಾಖಲಿಸುವಂತೆ ನೋಟಿಸ್‌ನಲ್ಲಿ ಸೂಚಿಸಲಾಗಿದೆ.

1